ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಬಿ.ಬಿ.ತೀರ್ಥ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಖಾನಾಪುರ, ಮತ್ತು ಮತ್ತಿತರರ ವಿರುದ್ಧ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ಮಾನ್ಯ ಲೋಕಾಯುಕ್ತರವರಿಗೆ ವಹಿಸುವ ಕುರಿತು.

**ಓದಲಾಗಿದೆ:** 1. ಮಾನ್ಯ ಉಪಲೋಕಾಯುಕ್ತರು, ಇವರು ಕರ್ನಾಟಕ ಲೋಕಾಯಕ್ತ ಕಾಯ್ದೆ 1984ರ ಕಲಂ 12(3) ರಡಿ ಸಲ್ಲಿಸಿರುವ ವರದಿಸಂಖ್ಯೆ:ಕಂಪ್ಲೇಂಟ್/ಉಪಲೋಕ್/ಬಿಜಿಎಂ/266/2010/ಎಆರ್‌ಇ-5, ದಿನಾಂಕ:01.10.2016

2. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರ ಅ.ಸ.ಪತ್ರ ಸಂಖ್ಯೆ:ಕಂಪ್ಲೇಂಟ್/ಉಪಲೋಕ್/ಬಿಜಿಎಂ/266/2010/ಎಆರ್‌ಇ-5, ದಿನಾಂಕ: 04.10.2016.

****

ಪ್ರಸ್ತಾವನೆ:

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರು ಮೇಲೆ ಓದಲಾದ(2)ರಲ್ಲಿ ಓದಲಾದ ಪತ್ರದೊಂದಿಗೆ, ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984ರ ಕಲಂ 12(3) ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರವರು ಮೇಲೆ(1) ರಲ್ಲಿ ಓದಲಾದಂತೆ ನೀಡಿರುವ ವರದಿ ಹಾಗೂ ಇತರ ದಾಖಲೆಗಳನ್ನು ಸರ್ಕಾರಕ್ಕೆ ಕಳುಹಿಸಿ, ಸದರಿ ವರದಿಯಲ್ಲಿನ ಶಿಫಾರಸ್ಸಿನಂತೆ ಕ್ರಮ ಕೈಗೊಂಡು, ಕೈಗೊಂಡ ಕ್ರಮದ ಬಗ್ಗೆ ತಿಳಿಸುವಂತೆ ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರವರ ವರದಿ ಹಾಗೂ ಇತರೆ ದಾಖಲೆಗಳನ್ನು ಸರ್ಕಾರವು ಪರಿಶೀಲಿಸಿದೆ. 12009-10ನೇ ಸಾಲಿನಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಕೈಗೊಳ್ಳಲಾದ ಕಾಮಗಾರಿಗಳು ಕಳಪೆ ಕಾಮಗಾರಿಗಳಾಗಿರುತ್ತವೆ ಎಂದು ಆರೋಪಿಸಿ ಈ ಕೆಳಕಂಡ ಅಧಿಕಾರಿ/ಅಧಿಕಾರೇತರರುಗಳ ವಿರುದ್ಧ ಶ್ರೀ ರಾಂಭಾಹು ಉಮಾಜಿ, ಖಾನಾಪುರ ತಾಲ್ಲೂಕು ಇವರು ನೀಡಿದ್ದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 9 ರನ್ವಯ ತನಿಖೆಗೆ ಕೈಗೆತ್ತಿಕೊಂಡು ಲೋಕಾಯಕ್ತ ಸಂಸ್ಥೆಯ ತಾಂತ್ರಿಕ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು-2 ಇವರಿಂದ ತನಿಖೆಯನ್ನು ನಡೆಸಿ ಪಡೆಯಲಾದ ವರದಿಯಲ್ಲಿ ಒಟ್ಟು-8 ಲೋಪಗಳು ಕಂಡು ಬಂದಿರುತ್ತವೆ ಎಂದು ಮಾನ್ಯ ಉಪಲೋಕಾಯುಕ್ತರ ವರದಿಯಲ್ಲಿ ನಮೂದಿಸಲಾಗಿರುತ್ತದೆ.

| ಕ್ರಸಂಖ್ಯೆ: | ಅಧಿಕಾರಿಯ ಹೆಸರುಮತ್ತು ಪದನಾಮ | ಎದುರುದಾರರ ಸಂಖ್ಯೆ: |
|---|---|---|
| 1 | ಶ್ರೀಮತಿ ದೇವಕಾ ಕೆ.ಪಾಟೀಲ್, ಅಧ್ಯಕ್ಷರು ಬೇಕವಾಡ ಗ್ರಾಮ ಪಂಚಾಯತಿ | 1 |
| 2 | ಶ್ರೀ ಜೋತಿಭಾ ಕೆ.ಅಂಭೇಟಕರ, ಅಂದಿನ ಕಾರ್ಯದರ್ಶಿ, ಬೇಕವಾಡ ಗ್ರಾಮ ಪಂಚಾಯತಿ. | 2 |

ತನಿಖಾಧಿಕಾರಿಯಿಂದ ವಿಚಾರಣಾ ವರದಿಯನ್ನು ಸ್ವೀಕರಿಸಿದ ನಂತರ ಈ ಕೆಳಕಂಡ ಅಧಿಕಾರಿ/ನೌಕರರುಗಳನ್ನು ಎದುರದಾರರು 3-7 ಎಂದು ಸೇರಿಸಿಕೊಂಡು ತನಿಖಾ ವರದಿ/ದೂರನ್ನು ಅವರಿಗೆ ಕಳುಹಿಸಿ ತಮ್ಮ ಉತ್ತರವನ್ನು ನೀಡುವಂತೆ ಸೂಚಿಸಲಾಗಿದ್ದು, ಇದಕ್ಕೆ ಪ್ರತಿಕ್ರಿಯೆಯಾಗಿ ಎದುರುದಾರರು 2 ಮತ್ತು 5 ಇವರುಗಳು ಮಾತ್ರ ಉತ್ತರವನ್ನು ಸಲ್ಲಿಸಿ ವಿಚಾರಣಾ ವರದಿಯಲ್ಲಿನ ಅಂಶಗಳನ್ನು ಅಲ್ಲಗಳೆದಿರುತ್ತಾರೆಂದು ಇನ್ನುಳಿದ ಎದುರುದಾರರು 1, 3, 4, 6 ಮತ್ತು 7, ಇವರುಗಳು ಉತ್ತರವನ್ನು ನೀಡಿರುವುದಿಲ್ಲವೆಂದು ಹಾಗೂ ಎದುರುದಾರರು 2 ರವರಾದ ಶ್ರೀ ಜಿ.ಕೆ.ಅಂಬೇಟಕರ, ಇವರು ದಿನಾಂಕ: 31.05.2014 ರಂದು ಸರ್ಕಾರಿ ಸೇವೆಯಿಂದ ವಯೋನಿವೃತ್ತಿ ಹೊಂದಿದ್ದ ಕಾರಣ, ಇತರೆ ಅಧಿಕಾರಿಗಳನ್ನು ಎದುರುದಾರರುಗಳೆಂದು ಸೇರ್ಪಡಿಸುವ ಪೂರ್ವದಲ್ಲಿಯೇ ನೋಟಿಸನ್ನು ಜಾರಿ ಮಾಡಲಾಗಿರುತ್ತದೆ ಎಂದು ವರದಿಸುತ್ತಾ, ಸಂಬಂಧಪಟ್ಟ ದಾಖಲಾತಿ ಮತ್ತು ಸಂಗತಿಗಳನ್ನು ಪರಿಶೀಲಿಸಲಾಗಿ, ಎದುರುದಾರರುಗಳು 2-7 ರವರು ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವೆಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ವರ್ತನೆ/ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿಗಳು 1966ರ ನಿಯಮ 3(i)(ii) (iii)ರನ್ನು ಉಲ್ಲಂಘಿಸಿರುವುದರಿಂದ, ಸದರಿ ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆಯನ್ನು ಕೈಗೊಳ್ಳಲು ಪ್ರಕರಣವನ್ನು ತಮಗೆ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 14(ಎ) ರನ್ವಯ ವಹಿಸಿಕೊಡುವಂತೆ ಹಾಗೂ ಎದುರುದಾರರು-2 ಇವರು ಈಗಾಗಲೇ ಸರ್ಕಾರಿ ಸೇವೆಯಿಂದ ನಿವೃತ್ತಿ ಹೊಂದಿರುವುದರಿಂದ, ಇವರ ವಿರುದ್ಧ ಇಲಾಖಾ ವಿಚಾರಣೆಯನ್ನು ಜರುಗಿಸಲು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 214(2)(ಬಿ) ರನ್ವಯ ಅನುಮತಿ ನೀಡುವಂತೆ ಮಾನ್ಯ ಉಪಲೋಕಾಯುಕ್ತರು ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3) ರನ್ವಯ ಮಾಡಿರುವ ಶಿಫಾರಸ್ಸನ್ನು ಕಳುಹಿಸಿಕೊಡುತ್ತಾ, ಅಂತೆಯೇ ಕ್ರಮವಹಿಸುವಂತೆ ಅಪರ ನಿಬಂಧಕರು, ರವರು ಕೋರಿರುತ್ತಾರೆ.

| ಕ್ರ.ಸಂಖ್ಯೆ: | ಅಧಿಕಾರಿಯ ಹೆಸರುಮತ್ತು ಪದನಾಮ | ಎದುರುದಾರರ ಸಂಖ್ಯೆ: |
|---|---|---|
| 1 | ಶ್ರೀ ಎಂ.ವೈ.ಇಟಗೇಕರ, ಅಂದಿನ ಕಾರ್ಯದರ್ಶಿ, ಬೇಕವಾಡ ಗ್ರಾಮ ಪಂಚಾಯತಿ | 3 |
| 2 | ಶ್ರೀ ಬಿ.ಬಿ.ತೀರ್ಥ, ಅಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಖಾನಾಪುರ | 4 |
| 3 | ಶ್ರೀ ಹೆಚ.ಕೆ.ವೆಂಟಗೂಡಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಖಾನಾಪುರ | 5 |
| 4 | ಶ್ರೀ ಎಂ.ಎಸ್.ಬಿರಾದಾರ ಅಂದಿನ ಕಿರಿಯ ಅಭಿಯಂತರರು | 6 |
| 5 | ಶ್ರೀ ಎಸ್.ಬಿ.ಒಣರೊಟ್ಟಿ, ಅಂದಿನ ಕಿರಿಯ ಅಭಿಯಂತರರು, | 7 |

ಅಧಿಕಾರೇತರರಾದ ಎದುರುದಾರರು-1, ಶ್ರೀಮತಿ ದೇವಿಕಾ ಕೆ.ಪಾಟೀಲ್, ಬೇಕವಾಡ ಗ್ರಾಮ ಪಂಚಾಯತಿ ಹಿಂದಿನ ಅಧ್ಯಕ್ಷರು, ಇವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಕಾಯ್ದೆಯನ್ವಯ, ಕ್ರಮ ಕೈಗೊಳ್ಳುಂತೆ, ನಿರ್ದೇಶಕರು ಪಂಚಾಯತ್ ರಾಜ್-1, ಇವರನ್ನು ದಿನಾಂಕ: ರ ಪತ್ರದಲ್ಲಿ ಕೋರಲಾಗಿರುತ್ತದೆ.

ಮಾನ್ಯ ಉಪಲೋಕಾಯುಕ್ತರ ವರದಿ ಹಾಗೂ ಶಿಫಾರಸ್ಸು ಅದರೊಂದಿಗಿನ ದಾಖಲಾತಿಗಳನ್ನು ಪರಿಶೀಲಿಸಲಾಗಿ, ಎದುರುದಾರರು 2 ರಿಂದ 7 ರವರು ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಲೋಪವೆಸಗಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ. ಆದುದರಿಂದ, ಮಾನ್ಯ ಉಪಲೋಕಾಯುಕ್ತ-1 ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆಯ 1984ರ ಕಲಂ 12(3) ರನ್ವಯ, ಮಾಡಿರುವ ಶಿಫಾರಸ್ಸಿನಂತೆ, ಎದುರುದಾರರು 2 ರಿಂದ 7 ರವರ ವಿರುದ್ಧದ ಆರೋಪಗಳ ಸಂಬಂಧ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 11 ರನ್ವಯ ಜರುಗಿಸಲು ಪ್ರಕರಣವನ್ನು ಅದೇ ನಿಯಮಾವಳಿಗಳ ನಿಯಮ 14(ಎ) ರನ್ವಯ ಮಾನ್ಯ ಉಪಲೋಕಾಯುಕ್ತ-1 ರವರಿಗೆ ವಹಿಸಲು ಹಾಗೂ ಎದುರುದಾರರು 2 ರವರಾದ ಶ್ರೀ ಜಿ.ಕೆ.ಅಂಬೇಟಕರ್, ಇವರ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 214(2)(ಬಿ) ರನ್ವಯ ಮಂಜೂರಾತಿ ನೀಡಲು ಸರ್ಕಾರವು ತೀರ್ಮಾನಿಸಿದೆ. ಆದುದರಿಂದ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 213 ವಿಸೇಬಿ 2016 ಬೆಂಗಳೂರು ದಿನಾಂಕ:18-11-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಮೇರೆಗೆ, 2ನೇ ಎದುರುದಾರರಾದ ಶ್ರೀ ಜೋತಿಭಾ ಕೆ.ಅಂಭೇಟಕರ, ಹಿಂದಿನ ಕಾರ್ಯದರ್ಶಿ, ಬೇಕವಾಡ ಗ್ರಾಮ ಪಂಚಾಯತಿ, ಇವರ ವಿರುದ್ಧ ಇಲಾಖಾ ವಿಚಾರಣೆಯನ್ನು ಜರುಗಿಸಲು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 214(2)(ಬಿ)(i) ರನ್ವಯ ಸರ್ಕಾರದ ಮಂಜೂರಾತಿಯನ್ನು ನೀಡಿ, ಈ ಕೆಳಕಂಡ ಅಧಿಕಾರಿ/ನೌಕರರುಗಳ ವಿರುದ್ಧದ ಆರೋಪಗಳ ಸಂಬಂಧ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 11 ಮತ್ತು 11(ಎ) ರನ್ವಯ ಸಮಗ್ರವಾದ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ಅದೇ ನಿಯಮಾವಳಿಗಳ ನಿಯಮ-14(ಎ)ರ ಪ್ರಕಾರ ಮಾನ್ಯ ಉಪಲೋಕಾಯುಕ್ತರು-1, ಕರ್ನಾಟಕ ಲೋಕಾಯುಕ್ತ ರವರಿಗೆ ವಹಿಸಿ ಆದೇಶಿಸಿದೆ.

| ಕ್ರಸಂಖ್ಯೆ: | ಅಧಿಕಾರಿಯ ಹೆಸರುಮತ್ತು ಪದನಾಮ | ಎದುರುದಾರರ ಸಂಖ್ಯೆ: |
|---|---|---|
| 1. | ಶ್ರೀ ಜೋತಿಭಾ ಕೆ.ಅಂಭೇಟಕರ, ಹಿಂದಿನ ಕಾರ್ಯದರ್ಶಿ, ಬೇಕವಾಡ ಗ್ರಾಮ ಪಂಚಾಯತಿ, | 2 |
| 2. | ಶ್ರೀ ಎಂ.ವೈ.ಇಟಗೇಕರ, ಅಂದಿನ ಕಾರ್ಯದರ್ಶಿ, ಬೇಕವಾಡ ಗ್ರಾಮ ಪಂಚಾಯತಿ | 3 |
| 3. | ಶ್ರೀ ಜಿ.ಜಿ.ತೀರ್ಥ, ಅಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಖಾನಾಪುರ | 4 |
| 4. | ಶ್ರೀ ಹೆಚ.ಕೆ.ವೆಂಟಗೂಡಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಖಾನಾಪುರ | 5 |
| 5. | ಶ್ರೀ ಎಂ.ಎಸ್.ಬಿರಾದಾರ ಅಂದಿನ ಕಿರಿಯ ಅಭಿಯಂತರರು | 6 |
| 6. | ಶ್ರೀ ಎಸ್.ಬಿ.ಒಣರೊಟ್ಟಿ, ಅಂದಿನ ಕಿರಿಯ ಅಭಿಯಂತರರು, | 7 |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

18/11/2016
(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು-1 ಕರ್ನಾಟಕ ಲೋಕಾಯುಕ್ತ, ಬೆಂಗಳೂರು

3) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗ ಇಲಾಖೆ, ವಿಕಾಸಸೌಧ, ಬೆಂಗಳೂರು.
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಬೆಳಗಾವಿ.
5) ನಿರ್ದೇಶಕರು (ಪಂ.ರಾಜ್-I), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
6) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು-01.
7) ಸರ್ಕಾರದ ಅಧೀನ ಕಾರ್ಯದರ್ಶಿ, (ಸೇವೆಗಳು-ಎ) ಲೋಕೋಪಯೋಗಿ ಇಲಾಖೆ, ವಿಕಾಸ ಸೌಧ ಬೆಂಗಳೂರು.
8) ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

<u>ಪ್ರತಿ ಮಾಹಿತಿಗಾಗಿ:</u>

9) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
10) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್)/ ಜಂಟಿ ಕಾರ್ಯದರ್ಶಿ (ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
11) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
12) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.